# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | 565 (862) |
| **ಸದಸ್ಯರ ಹೆಸರು** | | **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **26-12-2022** |
| **ಉತ್ತರಿಸಬೇಕಾದ ಸಚಿವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| ಅ) | ಕಾಲೇಜು ಶಿಕ್ಷಣ ಇಲಾಖೆಯು ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿಯನ್ನು ನಿರ್ಬಂಧಿಸಿ ಯಾವ ದಿನಾಂಕದಂದು ಆದೇಶ ಹೊರಡಿಸಲಾಗಿದೆ; | ಸರ್ಕಾರದ ಪತ್ರ ಸಂಖ್ಯೆ:ಇಡಿ 246 ಯುಪಿಸಿ 2001, ದಿನಾಂಕ:01-02-2002 ರಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆಯಲ್ಲಿದ್ದಾಗ ಮರಣ ಹೊಂದಿದ ನೌಕರನ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲವೆಂದು ತಿಳಿಸಲಾಗಿದೆ.<br>ಅಲ್ಲದೆ ಸರ್ಕಾರದ ಆದೇಶ ಸಂಖ್ಯೆ:ಇಡಿ 551 ಯುಪಿಸಿ 99, ದಿನಾಂಕ:07-08-2003ರ ಅಧ್ಯಾಯ-IV ನಿಯಮ 8(2) ರ ಪ್ರಕಾರ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿ01-03-2001 ರಂದು ಹಾಗೂ ತದನಂತರ ತೆರವಾಗುವ ಎಲ್ಲಾ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಟ್ಟಿರುತ್ತದೆ. ಆದ್ದರಿಂದ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಆಧಾರದ ನೇಮಕಾತಿಗೆ ಅವಕಾಶವಿರುವುದಿಲ್ಲ. |
| ಆ) | ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಗ್ರೂಪ್ ಸಿ ಹಾಗೂ ಗ್ರೂಪ್ ಡಿ ನೌಕರರು ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಇ) | ಸದರಿ ನೌಕರರು ಕರ್ತವ್ಯದಲ್ಲಿದ್ದಾಗಲೇ ಮೃತಪಟ್ಟಲ್ಲಿ ಅವರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಅವಕಾಶ ನೀಡದಿದ್ದಲ್ಲಿ, ಮೃತಪಟ್ಟವರ ಕುಟುಂಬಗಳು ಬೀದಿ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; | ಬಂದಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ:ಇಡಿ 551 ಯುಪಿಸಿ 99, ದಿನಾಂಕ:07-08-2003ರ ಅಧ್ಯಾಯ-IV ನಿಯಮ 8(2) ರ ಪ್ರಕಾರ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿ01-03-2001 ರಂದು ಹಾಗೂ ತದನಂತರ ತೆರವಾಗುವ ಎಲ್ಲಾ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಟ್ಟಿರುತ್ತದೆ. ಆದ್ದರಿಂದ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಆಧಾರದ ನೇಮಕಾತಿಗೆ ಅವಕಾಶವಿರುವುದಿಲ್ಲ. |
| ಈ) | ಸದರಿ ನಿಯಮಾವಳಿಗಳು ಭಾರತದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ವಿರುದ್ಧವಾದ ನಿಯಮಾವಳಿ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಉ) | ಬಂದಿದ್ದಲ್ಲಿ, ಈ ನಿಯಮಾವಳಿಗಳಿಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದೆಯೇ; | ಉದ್ಭವಿಸುವುದಿಲ್ಲ. |
| ಊ) | ಹಾಗಿದ್ದಲ್ಲಿ, ನಿಯಮಾವಳಿಗಳಿಗೆ ಯಾವಾಗ ತಿದ್ದುಪಡಿ ತರಲಾಗುವುದು? | |

ಇಡಿ 172 ಯುಪಿಸಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು